# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ. ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 557

ಉತ್ತರಿಸಬೇಕಾದ ದಿನಾಂಕ : 19.07.2024

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ). | ಗ್ರಾಮಗಳಿಗೆ ಶುದ್ಧ ನೀರು ಪೂರೈಸುವಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳ ಕರ್ತವ್ಯಗಳೇನು: | ಗ್ರಾಮೀಣ ಜನವಸತಿ ಪ್ರದೇಶಗಳಿಗೆ ಶುದ್ಧ ಕುಡಿಯುವ ನೀರನ್ನು ಪೂರೈಸುವಲ್ಲಿ ಇಲಾಖೆಯ ಅಧಿಕಾರಿಗಳ ಕರ್ತವ್ಯಗಳು ಈ ಕೆಳಕಂಡಂತಿವೆ.<br>1. ಲಭ್ಯವಿರುವ ನೀರಿನ ಮೂಲಗಳಿಂದ ಪೈಪ್ ಲೈನ್‌ಗಳ ಮೂಲಕ, ಸಂಪರ್ಕ ವ್ಯವಸ್ಥೆಯನ್ನು ಕಲ್ಪಿಸಿ, ಕಾರ್ಯಾತ್ಮಕ ನಳ ಸಂಪರ್ಕದ ಕಲ್ಪಿಸುವುದು.<br>2. ನೀರಿನ ಗುಣಮಟ್ಟದ ಪರೀಕ್ಷೆಯನ್ನು ಪ್ರಯೋಗಾಲಯಗಳಲ್ಲಿ ಕಾಲ-ಕಾಲಕ್ಕೆ ಕೈಗೊಳ್ಳುವುದು.<br>3. ಒಂದು ವೇಳೆ ನೀರು ಕಲುಷಿತವೆಂದು ಕಂಡು ಬಂದರೆ ಪರ್ಯಾಯ ವ್ಯವಸ್ಥೆಯ ಮೂಲಕ ನೀರನ್ನು ಒದಗಿಸುವುದು.<br>4. ಗ್ರಾಮೀಣ ಜನವಸತಿ ಪ್ರದೇಶಗಳಲ್ಲಿ ಅಳವಡಿಸಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆ.<br>5. ಗ್ರಾಮಗಳಿಗೆ ನೀರು ಸರಬರಾಜು ಮಾಡಲು ಅಗತ್ಯವಿರುವ ಎಲ್ಲಾ ಕೆಲಸ-ಕಾರ್ಯಗಳನ್ನು ನಿರ್ವಹಿಸುವುದು. |
| ಆ) | ಸದರಿ ಅಧಿಕಾರಿಗಳು ಗ್ರಾ,ಮ ಪಂಚಾಯತಿಗಳಿಗೆ ನಿಯಮಿತ ವಾಗಿ ಭೇಟಿ ನೀಡಿ ಗ್ರಾಮ ಪಂಚಾ ಯತಿಯ ಸಿಬ್ಬಂದಿಗಳಿಗೆ ಶುದ್ಧ ಕುಡಿಯುವ ನೀರಿನ ಪೂರೈಕೆಯ ಬಗ್ಗೆ ಸೂಕ್ತ ತರಬೇತಿ ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ: | ಹೌದು<br>ಶುದ್ಧ ಕುಡಿಯುವ ನೀರಿನ ಸರಬರಾಜು ಮಾಡುವ ಕುರಿತು, ಗ್ರಾಮಗಳಲ್ಲಿ ಸ್ವಚ್ಚತೆಯನ್ನು ಕಾಪಾಡುವ ಬಗ್ಗೆ, ಹಾಗೂ ಪ್ರಾಥಮಿಕ ಹಂತದಲ್ಲಿ ಗ್ರಾಮ ಪಂಚಾಯತಿ ಮಟ್ಟದಲ್ಲಿ Field Test Kit & H2S Vials ಗಳ ಮೂಲಕ ನೀರಿನ ಗುಣಮಟ್ಟವನ್ನು ಪರೀಕ್ಷಿಸುವ ಬಗ್ಗೆ ತರಬೇತಿಯನ್ನು ನೀಡಲಾಗಿರುತ್ತದೆ.<br>ಗ್ರಾಮ ಪಂಚಾಯತಿ ಸಿಬ್ಬಂದಿ ಮತ್ತು ವಾಟರ್ ಮೆನ್ ಗಳಿಗೆ ನೀರಿನ ಸರಬರಾಜು ವ್ಯವಸ್ಥೆಯಡಿಯಲ್ಲಿ ಬರುವ ಪೈಪ್ ಲೈನ್‌ಗಳನ್ನು ರಿಪೇರಿ ಮಾಡಲು Plumbing ತರಬೇತಿಯನ್ನು ನೀಡಲಾಗಿರುತ್ತದೆ.<br>ನೀರಿನ ಗುಣಮಟ್ಟ ಪರೀಕ್ಷೆಗಳನ್ನು ಕೈಗೊಳ್ಳುವ ಬಗ್ಗೆ ಮತ್ತು ಶುದ್ಧ ಕುಡಿಯುವ ನೀರಿನ ಸರಬರಾಜಿನ ಕುರಿತು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ |

| | | |
|---|---|---|
| | | ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ತರಬೇತಿಗಳನ್ನು ನೀಡಲಾಗಿರುತ್ತದೆ. |
| ಇ) | ಜೂನ್-2024 ರಲ್ಲಿ ತುಮಕೂರು ಜಿಲ್ಲೆ ಮಧುಗರಿ ತಾಲ್ಲೂಕಿನಲ್ಲಿ ಕಲುಷಿತ ನೀರು ಸೇವಿಸಿ ಹಲವು ಗ್ರಾಮಸ್ಥರು ಅಸ್ವಸ್ಥರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇಂತಹ ಘಟನೆ ಮರು ಕಳಿಸದಂತೆ ಸರ್ಕಾರ ಕೈಗೊಂಡ ಕ್ರಮಗಳೇನು: | ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕಿನಲ್ಲಿ ಕಲುಷಿತ ನೀರು ಸೇವನೆಯಿಂದ ಗ್ರಾಮಸ್ಥರು ಅಸ್ವಸ್ಥರಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>ಕಲುಷಿತ ನೀರಿನ ಸೇವನೆಯಿಂದ ಸಂಭವಿಸಿರುವ ಪ್ರಕರಣಗಳು ಘಟನೆ ಮರುಕಳಿಸದಂತೆ ಇಲಾಖೆಯಿಂದ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲಾಗಿದ್ದು,<br>1. ಕಲುಷಿತ ನೀರಿನ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಮುಂಜಾಗ್ರತ ಕ್ರಮವಾಗಿ ರಾಜ್ಯಾದ್ಯಂತ ಎರಡು ಹಂತಗಳಲ್ಲಿ ಆಂದೋಲನ ರೀತಿಯಲ್ಲಿ FTK ಪರೀಕ್ಷೆಯ ಅಭಿಯಾನವನ್ನು ಹಮ್ಮಿಕೊಂಡು, ರಾಜ್ಯದ ಎಲ್ಲ ಗ್ರಾಮಗಳಲ್ಲಿ ಇದುವರೆವಿಗೂ ವಿವಿಧ ಕುಡಿಯುವ ನೀರಿನ ಮೂಲಗಳಿಂದ ಒಟ್ಟು 4,91,052 ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷಿಸಲಾಗಿದೆ. ಕಲುಷಿತವೆಂದು ಕಂಡುಬಂದ ಪ್ರಕರಣಗಳಲ್ಲಿ ನಿವಾರಣಾ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>2. ಇಲಾಖೆಯ ಪ್ರಯೋಗಾಲಯಗಳಲ್ಲಿ ಪ್ರಸಕ್ತ ಸಾಲಿನಲ್ಲಿ, 67316 ನೀರಿನ ಮಾದರಿಗಳನ್ನು ರಾಸಾಯನಿಕ ಮಾನದಂಡ (chemical parameters)ಗಳಿಗೆಮತ್ತು ಮೈಕ್ರೋಬಯಾಲಜಿ (Microbiology parameters) ನದಂಡಗಳನ್ನು ಪರೀಕ್ಷಿಸಲಾಗಿದೆ.<br>3. ರಾಜ್ಯದಲ್ಲಿನ Over Head Tank ಗಳನ್ನು ಪ್ರತಿ ಮೂರು ಗಳಿಗೊಮ್ಮೆ ಸ್ವಚ್ಛಗೊಳಿಸಲು ಮತ್ತು ನಿರಂತರ ಸ್ವಚ್ಛಗೊಳಿಸುವಿಕೆಯ ಮೇಲ್ವಿಚಾರಣೆಯನ್ನು ಮಾಡಲು ಜಿಲ್ಲಾ, ಮತ್ತು ತಾಲ್ಲೂಕು ಮಟ್ಟದ ಕಾರ್ಯಪಡೆಸಮಿತಿ (Task Force Committee) ಗಳನ್ನು ರಚಿಸಲಾಗಿದೆ.<br>4. ರಾಜ್ಯದಲ್ಲಿಎಲ್ಲಾಗ್ರಾಮಗಳನ್ನೊಳಗೊಂಡಂತೆ ಕುಡಿಯುವ ನೀರಿನ ಮೂಲಗಳು ಕಲುಷಿತಗೊಳ್ಳದಂತೆ, ಈಗಾಗಲೇ ರಕ್ಷಣೆ (Source Protection) ಒದಗಿಸಲಾಗುತ್ತಿದೆ.<br>ಇಲಾಖೆಯ ಅಭಿಯಂತರುಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಜನವಸತಿ ಪ್ರದೇಶಗಳಿಗೆ ಭೇಟಿ ನೀಡಿ ಜಂಟಿ ತಪಾಸಣೆ ನಡೆಸಿ ದೃಢೀಕೃತ ವರದಿಯನ್ನು ಸಲ್ಲಿಸಿರುತ್ತಾರೆ. ಸದರಿ ಜಂಟಿ ತಪಾಸಣೆಯಲ್ಲಿ ಒಟ್ಟು 1945 ಪೈಪ್ ಲೈನ್ ಹಾನಿಯಾಗಿರುವ ಘಟನೆಗಳು ವರದಿಯಾಗಿದ್ದು, ಪೈಪ್ ಲೈನ್ ಸರಿಪಡಿಸಲು ಕ್ರಮ ಕೈಗೊಳ್ಳಲಾಗಿದೆ |
| ಈ) | ಗ್ರಾಮೀಣ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಗ್ರಾಮ ಪಂಚಾಯತಿ ವ್ಯಾಪ್ತಿಯ ನೀರು ಸಂಗ್ರಹಣ ಮತ್ತು ಪೂರೈಕೆಯ ಮಾರ್ಗಗಳನ್ನು ಪರಿಶೀಲಿಸಲು ಸರ್ಕಾರ ಆದೇಶಿಸುವುದೇ: | ಈಗಾಗಲೇ ಗ್ರಾಮೀಣ ಜನವಸತಿ ಪ್ರದೇಶಗಳಲಿ ನೀರು ಸರಬರಜು ಕಾಮಗಾರಿಗಳ ಸಂಪರ್ಕ ವ್ಯವಸ್ಥೆಯ ಸಮರ್ಪಕತೆಯನ್ನು ಖಚಿತಪಡಿಸಿಕೊಳ್ಳುವ ಸಲುವಾಗಿ ಸಂಬಂಧಪಟ್ಟ AE/JE ಗಳು ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕಡ್ಡಾಯವಾಗಿ ಜಂಟಿಯಾಗಿ ಸ್ಥಳ ಪರಿಶೀಲನೆ ನಡೆಸಿ, ಅನುಷ್ಠಾನಗೊಳಿಸಿರುವ ಎಲ್ಲಾ ಕಾಮಗಾರಿಗಳಲ್ಲಿನ ಪೈಪ್‌ಲೈನ್ ಗಳಲ್ಲಿ ಯಾವುದೇ ಸೋರಿಕೆಯಾಗದಿರುವ ಬಗ್ಗೆ |

| | | |
|---|---|---|
| | | ಹಾಗೂ ಹಾನಿಯಾಗದಿರುವ ಬಗ್ಗೆ ಶೇ 100 ರಷ್ಟು ಸಂಪರ್ಕಗಳನ್ನು ಪರಿಶೀಲನೆ ಕೈಗೊಂಡು, ಅಗತ್ಯವಿರುವ ಕಡೆಯಲ್ಲೆಲ್ಲಾ, ಜಂಟಿ ದೃಢೀಕರಣ ವರದಿಯನ್ನು ಸಲ್ಲಿಸುವಂತೆ ಪತ್ರ ಸಂಖ್ಯೆ: RDWSD/06/WSSO/WQMSP/2020-21 ದಿನಾಂಕ: 12.06.2024 ರ ಪತ್ರದಲ್ಲಿ ತಿಳಿಸಲಾಗಿರುತ್ತದೆ |
| **ಉ)** | ಗ್ರಾಮ ಪಂಚಾಯತಿಗಳಿಗೆ ಪ್ರತ್ಯೇಕ ತಾಂತ್ರಿಕ ಸಿಬ್ಬಂದಿಯಿಲ್ಲದ ಕಾರಣ ಗ್ರಾಮೀಣ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳನ್ನೇ ಕಲುಷಿತ ನೀರು ಪೂರೈಕೆಗೆ ಸಂಪೂರ್ಣ ಜವಾಬ್ದಾರರನ್ನಾಗಿ ಮಾಡಲಾಗುವುದೇ? | ಗ್ರಾಮೀಣ ಜನವಸತಿ ಪ್ರದೇಶಗಳಿಗೆ ಕುಡಿಯುವ ನೀರನ್ನು ಸರಬರಾಜು ಮಾಡಲು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಸೃಜಿಸಿ ಸದರಿ ನೀರಿನ ಸರಬರಾಜು ವ್ಯವಸ್ಥೆಯನ್ನು ನಿರ್ವಹಣೆ ಮಾಡಲು ಗ್ರಾಮ ಪಂಚಾಯತಿಗಳಿಗೆ ವಹಿಸಲಾಗುವುದು.<br><br>ಆದುದರಿಂದ ಕಲುಷಿತ ನೀರು ಪೂರೈಕೆಗೆ ಸಂಬಂಧಿಸಿದಂತೆ ಯಾವ ಹಂತದಲ್ಲಿ ನೀರು ಕಲುಷಿತ ವಾಗಿದೆಯೇ ಎಂಬುದನ್ನು ಪರಿಶೀಲಿಸಿ, ಆಂತಹ ಕಾರಣಗಳಿಗೆ ಸಂಬಂಧಪಟ್ಟ ಅಧಿಕಾರಿಗಳನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದು. ಇಂತಹ ಕೆಲವು ಪ್ರಕರಣಗಳಲ್ಲಿ ಎರಡು ಇಲಾಖೆಯ ಅಧಿಕಾರಿಗಳನ್ನು ಕೂಡಾ ಜವಬ್ದಾರರನ್ನಾಗಿ ಮಾಡಲಾಗಿರುತ್ತದೆ. |

**ಕಡತ ಸಂಖ್ಯೆ RDWSD/CE/Tech/58/2024-25**

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು